ಕರ್ನಾಟಕ ವಿಧಾನ ಪರಿಷತ್ತು

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರು, ಇವರು ನಿಯಮ-72ರ ಅಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆ

------

ವಿಷಯ: ರಾಜ್ಯದಲ್ಲಿ ಅವೈಜ್ಞಾನಿಕ ರೋಡ್ ಹಂಪ್ಸ್‌ಗಳಿಂದ ಅಪಘಾತ ಹೆಚ್ಚಾಗುತ್ತಿರುವ ಬಗ್ಗೆ ಗರ್ಭಿಣಿಯರ ಪ್ರಾಣಕ್ಕೆ ಕುತ್ತು ತರುವಂತಹ ಈ ಅಪಾಯ ತಡೆಯುವ ಬದಲು ಅಪಾಯ ಹೆಚ್ಚಿಸುವ ಈ ರೋಡ್ ಹಂಪ್ಸ್‌ಗಳನ್ನು ಹಗಲು ವೇಳೆ ರಾತ್ರಿ ವೇಳೆ ಅತ್ಯಂತ ಸ್ಪಷ್ಟವಾಗಿ ಗೋಚರಿಸುವಂತೆ ಮಾಡಲು ಹಾಗೂ ಈ ಬಗ್ಗೆ ನ್ಯಾಯಾಲಯದ ಆದೇಶ ಸಾರಾಂಶ ಮತ್ತು ಇದರ ಪಾಲನೆ ಆಗದಿರುವ ಬಗ್ಗೆ ಸರ್ಕಾರ ಗಮನ ಸೆಳೆಯ ಬಯಸುತ್ತೇನೆ.

**ಸರ್ಕಾರದ ಉತ್ತರ**

ಮಾನ್ಯ ಸರ್ವೋಚ್ಛ ನ್ಯಾಯಾಲಯದ ರಸ್ತೆ ಸುರಕ್ಷತಾ ಸಮಿತಿಯವರ ಪತ್ರ ಸಂಖ್ಯೆ: F.No:24/CoRS/2014 dated: 3rd March 2015 ರಲ್ಲಿ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ಇರುವ ರಸ್ತೆ ಉಬ್ಬುಗಳನ್ನು ಮತ್ತು ರಂಬ್ಲರ್ ಸ್ಟ್ರಿಪ್‌ಗಳನ್ನು ತೆಗೆದು ಹಾಕಲು ನಿರ್ದೇಶನ ನೀಡಲಾಗಿದೆ. ಮಾನ್ಯ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಸರ್ಕಾರದ ಸುತ್ತೋಲೆ ಸಂಖ್ಯೆ:ಲೋಇ 277 ಸಿಆರ್‌ಎಂ 2017, ದಿನಾಂಕ: 18-04-2017 ರಲ್ಲಿ ರಾಜ್ಯದ ಅವೈಜ್ಞಾನಿಕ ರಸ್ತೆ ಉಬ್ಬುಗಳನ್ನು ಕೂಡಲೇ ತೆರವುಗೊಳಿಸುವುದು ಹಾಗೂ ಕೆಲವು ಸ್ಥಳಗಳಲ್ಲಿ ರಸ್ತೆಯ ಉಬ್ಬುಗಳು ಅವಶ್ಯವೆನಿಸಿದ್ದಲ್ಲಿ ಅವೈಜ್ಞಾನಿಕವಾಗಿರುವ ರಸ್ತೆಯ ಉಬ್ಬುಗಳನ್ನು ಐ.ಆರ್.ಸಿ. ಮಾನದಂಡಗಳಿಗನುಗುಣವಾಗಿ ವೈಜ್ಞಾನಿಕವಾಗಿ ಪರಿವರ್ತಿಸಿ, ಅವುಗಳ ನಿರ್ವಹಣೆ ಮಾಡುವುದು; ಈಗಾಗಲೇ ಅಸ್ತಿತ್ವದಲ್ಲಿರುವ ವೈಜ್ಞಾನಿಕ ರಸ್ತೆಯ ಉಬ್ಬುಗಳಿಗೆ ವಾಹನ ಸವಾರರಿಗೆ ದೂರದಿಂದಲೇ ಗೋಚರಿಸುವಂತೆ ಬಣ್ಣ ಬಳಿಯುವುದಲ್ಲದೇ ಕೆಲವು ಮುಖ್ಯ ಸ್ಥಳಗಳಲ್ಲಿ ಬೆಳಕನ್ನು ಪ್ರತಿಫಲಿಸುವ ರೇಡಿಯಂ ಬಣ್ಣದ ಪಟ್ಟಿಗಳನ್ನು ಅಂಟಿಸಿ, Cat Eyes ಅನ್ನು ಅಳವಡಿಸಿ, ಅಪಘಾತ ರಹಿತ ಸಂಚಾರಕ್ಕೆ ಅನುವು ಮಾಡಿಕೊಡಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಹೆದ್ದಾರಿ ಪ್ರಾಧಿಕಾರಗಳಿಗೆ ಸೂಚಿಸಲಾಗಿರುತ್ತದೆ. (ಪ್ರತಿ ಲಗತ್ತಿಸಿದೆ)

ಅಪಘಾತ ಸಂಭವಿಸಬಹುದಾದಂತಹ ಸ್ಥಳಗಳಲ್ಲಿ IRC (Indian Roads Congress) ನಲ್ಲಿರುವ ಮಾರ್ಗದರ್ಶನಗಳಂತೆ Raised Pedestrian Crossing ಅನ್ನು ಅಳವಡಿಸಿದ್ದು, ಹಗಲಿನ ವೇಳೆಯಲ್ಲಿ ಗೋಚರಿಸುವಂತೆ + Thermoplastic road marking ಗಳನ್ನು ಮತ್ತು ರಾತ್ರಿ ವೇಳೆಯಲ್ಲಿ ವಾಹನ ಚಾಲಕರಿಗೆ ಅತ್ಯಂತ ಸ್ಪಷ್ಟವಾಗಿ ಗೋಚರಿಸುವಂತೆ Cat Eyes / Reflective studs (RPM) ಗಳನ್ನು ಅಳವಡಿಸಲಾಗುತ್ತಿದೆ.

ಮಾನ್ಯ ಸರ್ವೋಚ್ಛ ನ್ಯಾಯಾಲಯದ ರಸ್ತೆ ಸುರಕ್ಷತಾ ಸಮಿತಿಯವರ ಪತ್ರ ಸಂಖ್ಯೆ: F.No:24/CoRS/2014 dated:3rd March 2015 ರಲ್ಲಿ ನೀಡಿರುವ ಆದೇಶದಂತೆ ರಾಜ್ಯದ ಲೋಕೋಪಯೋಗಿ ಇಲಾಖೆಯ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯರಸ್ತೆಗಳ ಮೇಲೆ ಇದ್ದ ಒಟ್ಟು 11240 ಸಂಖ್ಯೆಯ ರಸ್ತೆ ಉಬ್ಬುಗಳ ಪೈಕಿ ಅವೈಜ್ಞಾನಿಕವಾಗಿ ನಿರ್ಮಿಸಲಾಗಿದ್ದ 5354 ಸಂಖ್ಯೆಯ ರಸ್ತೆ ಉಬ್ಬುಗಳನ್ನು ವೈಜ್ಞಾನಿಕ ಉಬ್ಬುಗಳನ್ನಾಗಿ ಪರಿವರ್ತಿಸಲಾಗಿದೆ. 2862 ಸಂಖ್ಯೆಯ ರಸ್ತೆ ಅವೈಜ್ಞಾನಿಕ ಉಬ್ಬುಗಳನ್ನು ತೆರವುಗೊಳಿಸಲಾಗಿದೆ. ಬಾಕಿ ಉಳಿದಿರುವ 3024 ಸಂಖ್ಯೆಯ ಅವೈಜ್ಞಾನಿಕ ಉಬ್ಬುಗಳನ್ನು ತೆರವುಗೊಳಿಸುವ / ವೈಜ್ಞಾನಿಕ ಉಬ್ಬುಗಳನ್ನಾಗಿ ಪರವರ್ತಿಸಲು ಕ್ರಮ ವಹಿಸಲಾಗುತ್ತಿದೆ. ಕೆಲವು ಕಡೆ ವೈಜ್ಞಾನಿಕ ರಸ್ತೆ ಉಬ್ಬುಗಳನ್ನು ಸ್ಥಳೀಯರ ಬೇಡಿಕೆಯಂತೆ ನಿರ್ಮಿಸಲಾಗಿದೆ. ರಸ್ತೆಯ ಉಬ್ಬುಗಳನ್ನು ವಾಹನ ಸವಾರರಿಗೆ ದೂರದಿಂದಲೇ ಗೋಚರಿಸುವಂತೆ ಅಗತ್ಯವಿರುವ ಕ್ರಮಗಳನ್ನು ಕೈಗೊಳ್ಳಲು ರಸ್ತೆಗಳ ನಿರ್ವಹಣೆಗೆ ಬಿಡುಗಡೆ ಮಾಡಿರುವ ಅನುದಾನದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು

ಸಂಖ್ಯೆ: ಲೋಇ 85 ಸಿಐಎಸ್ 2023 (ಇ)

ಕರ್ನಾಟಕ ಸರ್ಕಾರ

ಸಂಖ್ಯೆ: ಲೋಇ 277 ಸಿಆರ್‌ಎಂ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 18/04/2017

ಸುತ್ತೋಲೆ

ವಿಷಯ: ರಾಜ್ಯದ ಲೋಕೋಪಯೋಗಿ ಇಲಾಖೆಯ ರಸ್ತೆಗಳಲ್ಲಿ ಅವೈಜ್ಞಾನಿಕವಾಗಿ ನಿರ್ಮಿಸಿರುವ ರಸ್ತೆ ಉಬ್ಬುಗಳನ್ನು ತೆರವುಗೊಳಿಸುವ ಬಗ್ಗೆ.

***

ರಾಜ್ಯದಲ್ಲಿರುವ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳಲ್ಲಿ ಅವೈಜ್ಞಾನಿಕವಾಗಿ ನಿರ್ಮಿಸಿರುವ ರಸ್ತೆಯ ಉಬ್ಬುಗಳಿಂದ ಹಾಗೂ ವೈಜ್ಞಾನಿಕವಾಗಿ ನಿರ್ಮಿಸಲಾಗಿರುವ ರಸ್ತೆಯ ಉಬ್ಬುಗಳ ನಿರ್ವಹಣೆಯಿಲ್ಲದೆ ಸಾರ್ವಜನಿಕ ಸುಗಮ ಸಂಚಾರಕ್ಕೆ ಅಡ್ಡಿ ಉಂಟಾಗಿರುವುದಲ್ಲದೆ, ಪ್ರಾಣ ಹಾನಿಯಂತಹ ಅಪಘಾತಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಇಲಾಖಾಧಿಕಾರಿಗಳಿಗೆ ರಾಜ್ಯದ ರಸ್ತೆಯಲ್ಲಿ ಹರಡಿರುವ ಅವೈಜ್ಞಾನಿಕ ರಸ್ತೆಯ ಹಂಪ್ಸ್‌ಗಳನ್ನು ತೆರವುಗೊಳಿಸಿ, ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವಂತೆ ಹಲವಾರು ಸೂಚನೆಗಳನ್ನು ನೀಡಿದ್ದಾಗಿಯೂ, ಇದುವರೆಗೆ ಅವೈಜ್ಞಾನಿಕ ರಸ್ತೆಯ ಹಂಪ್ಸ್‌ಗಳನ್ನು ಸಂಪೂರ್ಣವಾಗಿ ತೆರವುಗೊಳಿಸಲು ಕ್ರಮ ಕೈಗೊಳ್ಳದಿರುವುದು ಕಂಡುಬಂದಿರುತ್ತದೆ.

ಲೋಕೋಪಯೋಗಿ ಇಲಾಖೆಯ ರಸ್ತೆಗಳಲ್ಲಿ ನಿರ್ಮಿಸಿರುವ ಅವೈಜ್ಞಾನಿಕ ರಸ್ತೆ ಉಬ್ಬುಗಳನ್ನು ಈ ಕೂಡಲೇ ತೆರವುಗೊಳಿಸುವುದು ಹಾಗೂ ಕೆಲವು ಸ್ಥಳಗಳಲ್ಲಿ ರಸ್ತೆಯ ಉಬ್ಬುಗಳು ಅವಶ್ಯವೆನಿಸಿದಲ್ಲಿ ಅವೈಜ್ಞಾನಿಕವಾಗಿರುವ ರಸ್ತೆಯ ಉಬ್ಬುಗಳನ್ನು ಐ.ಆರ್.ಸಿ. ಮಾನದಂಡಗಳಿಗೆ ಅನುಗುಣವಾಗಿ ವೈಜ್ಞಾನಿಕವಾಗಿ ಪರಿವರ್ತಿಸಿ, ಅವುಗಳ ನಿರ್ವಹಣೆ ಮಾಡುವುದು. ಈಗಾಗಲೇ ಅಸ್ತಿತ್ವದಲ್ಲಿರುವ ವೈಜ್ಞಾನಿಕ ರಸ್ತೆಯ ಉಬ್ಬುಗಳಿಗೆ ವಾಹನ ಸವಾರರಿಗೆ ದೂರದಿಂದಲೇ ಗೋಚರಿಸುವಂತೆ ಬಣ್ಣ ಬಳಿಯುವುದಲ್ಲದೇ ಕೆಲವು ಮುಖ್ಯ ಸ್ಥಳಗಳಲ್ಲಿ ಬೆಳಕನ್ನು ಪ್ರತಿಫಲಿಸುವ ರೇಡಿಯಂ ಬಣ್ಣದ ಪಟ್ಟಿಗಳನ್ನು ಅಂಟಿಸಿ ಹಾಗೂ Cat Eyes ಅನ್ನು ಅಳವಡಿಸಿ ಅಪಘಾತ ರಹಿತ ಸಂಚಾರಕ್ಕೆ ಅನುವು ಮಾಡಿಕೊಡಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದು.

ಇನ್ನು ಮುಂದೆ, ಲೋಕೋಪಯೋಗಿ ಇಲಾಖೆಯ ರಸ್ತೆಗಳಲ್ಲಿ ಅವೈಜ್ಞಾನಿಕ ಉಬ್ಬುಗಳನ್ನು ನಿರ್ಮಿಸಿದ್ದು ಕಂಡುಬಂದಲ್ಲಿ, ವೈಜ್ಞಾನಿಕವಾಗಿ ನಿರ್ಮಿಸಿರುವ ರಸ್ತೆಯ ಉಬ್ಬುಗಳಿಗೆ ವಾಹನ ಸವಾರರಿಗೆ ಗೋಚರಿಸುವಂತೆ ನಿರ್ವಹಣೆ (ಬಣ್ಣ ಬಳಿಯುವುದಲ್ಲದೇ ಕೆಲವು ಮುಖ್ಯ ಸ್ಥಳಗಳಲ್ಲಿ ಬೆಳಕನ್ನು ಪ್ರತಿಫಲಿಸುವ ರೇಡಿಯಂ ಬಣ್ಣದ ಪಟ್ಟಿಗಳನ್ನು ಅಂಟಿಸಿ ಹಾಗೂ Cat Eyes ಅನ್ನು ಅಳವಡಿಸುವುದು) ಮಾಡಿ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿದೆ. ಒಂದು ವೇಳೆ ಈ ರೀತಿ ಕ್ರಮ ಕೈಗೊಳ್ಳದೇ ಅಪಘಾತಗಳು ಉಂಟಾದಲ್ಲಿ ಸಂಬಂಧಿಸಿದ ಸಹಾಯಕ ಕಾರ್ಯಪಾಲಕ ಇಂಜಿನೀಯರ್ ರವರನ್ನು ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತು ಕ್ರಮಕ್ಕೆ ಗುರಿಪಡಿಸಲಾಗುವುದು.

ಈ ಸೂಚನೆಗಳನ್ನು ಕಟ್ಟುನಿಟ್ಟಾಗಿ ಎಲ್ಲಾ ಉಪವಿಭಾಗಗಳ ಸಹಾಯಕ ಕಾರ್ಯಪಾಲಕ ಇಂಜಿನೀಯರ್‌ಗಳು ಪಾಲಿಸಲು ಸೂಚಿಸುತ್ತಾ, ಈ ಕ್ರಮದ ಮೇಲುಸ್ತುವಾರಿಯನ್ನು ಸಂಬಂಧಿಸಿದ ಕಾರ್ಯಪಾಲಕ ಇಂಜಿನೀಯರ್ ನಿರ್ವಹಿಸುವಂತೆ ನಿರ್ದೇಶನ ನೀಡಲಾಗಿದೆ.

(ಕೃಷ್ಣಮೂರ್ತಿ ಬಿ. ಕುಲಕರ್ಣಿ)
ಸರ್ಕಾರದ ಉಪ ಕಾರ್ಯದರ್ಶಿ
ಲೋಕೋಪಯೋಗಿ, ಬಂದರು ಮತ್ತು
ಒಳನಾಡು ಜಲಸಾರಿಗೆ ಇಲಾಖೆ
(ಸಂಪರ್ಕ ಮತ್ತು ಕಟ್ಟಡ)

ಇವರಿಗೆ:

1) ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು(ದಕ್ಷಿಣ), ಲೋಕೋಪಯೋಗಿ ಇಲಾಖೆ, ಬೆಂಗಳೂರು.
2) ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು(ಉತ್ತರ), ಲೋಕೋಪಯೋಗಿ ಇಲಾಖೆ, ಧಾರವಾಡ
3) ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು(ಈಶಾನ್ಯ), ಲೋಕೋಪಯೋಗಿ ಇಲಾಖೆ, ಕಲಬುರ್ಗಿ
4) ಮುಖ್ಯ ಇಂಜಿನಿಯರ್, ರಾಷ್ಟ್ರೀಯ ಹೆದ್ದಾರಿಗಳು, ಬೆಂಗಳೂರು.
5) ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಡಿ.ಸಿ.ಎಲ್., ಬೆಂಗಳೂರು.
6) ಮುಖ್ಯ ಆಡಳಿತಾಧಿಕಾರಿ, ಕೆಶಿಪ್, ಬೆಂಗಳೂರು.
7) ಮುಖ್ಯ ಯೋಜನಾಧಿಕಾರಿ, ಎಸ್.ಹೆಚ್.ಡಿ.ಪಿ., ಬೆಂಗಳೂರು.
8) ಆಂತರಿಕ ಆರ್ಥಿಕ ಸಲಹೆಗಾರರು, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸಸೌಧ, ಬೆಂಗಳೂರು.
9) ಅಧೀಕ್ಷಕ ಇಂಜಿನಿಯರ್, ಲೋಕೋಪಯೋಗಿ ವೃತ್ತ, ಬೆಂಗಳೂರು/ಮೈಸೂರು/ಮಂಗಳೂರು/ಹಾಸನ/ಶಿವಮೊಗ್ಗ/ ಧಾರವಾಡ/ ಬೆಳಗಾವಿ/ಕಲಬುರ್ಗಿ/ಬಳ್ಳಾರಿ.
10) ಎಲ್ಲಾ ಕಾರ್ಯಪಾಲಕ ಇಂಜಿನಿಯರ್/ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳಿಗೆ-ಸಂಬಂಧಿಸಿದ ಅಧೀಕ್ಷಕ ಇಂಜಿನಿಯರ್‌ಗಳ ಮುಖಾಂತರ.
11) ಮುಖ್ಯ ಮಾಹಿತಿ ಅಧಿಕಾರಿ, PRAMC, ಬಹುಮಹಡಿ ಕಟ್ಟಡ, ಇವರಿಗೆ ಕಳುಹಿಸುತ್ತಾ, ಈ ಸುತ್ತೋಲೆಯನ್ನು ಇಲಾಖೆಯ ವೆಬ್-ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.

ಪ್ರತಿ ಮಾಹಿತಿಗಾಗಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಹಿರಿಯ ಆಪ್ತ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿ, ಸಂಪರ್ಕ ಮತ್ತು ಕಟ್ಟಡಗಳು, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿಗಳು(ಕಟ್ಟಡ)/ಸಂಪರ್ಕ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಬೆಂಗಳೂರು.
7. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.